**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ, ಸಕಲೇಶಪುರ**

**C.C.No.277/2024**

| | | |
|---|---|---|
| **ಹೆಸರುಃ** | **ಕೆ ಬಿ ಮಲ್ಲೇಶ್** | **CW-1** |
| **ತಂದೆ/ಗಂಡ ಹೆಸರುಃ** | **ಬಸಪ್ಪಗೌಡ** | **PW-2** |
| **ವಯಸ್ಸುಃ** | **58 ವರ್ಷ** | |
| **ವೃತ್ತಿಃ** | **ವ್ಯವಸಾಯ** | |
| **ವಿಳಾಸಃ** | **ಹೆತ್ತೂರು** | **ದಿನಾಂಕಃ 19-03-2025** |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ಯವರಿಂದ.**

ಸಾಕ್ಷಿಯು ನಿಪಿ-1 ರಲ್ಲಿನ ತನ್ನ ಸಹಿ ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ-1ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು ಮಾದರಿ ಸೀಲಿನಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು, ಸಹಿಯನ್ನು ನಿಪಿ-2ಎ ಎಂದು ಗುರುತಿಸಲಾಯಿತು. ಆರೋಪಿ ನನ್ನ ಭಾವ ಇರುತ್ತಾರೆ. ಒಂದು ವರ್ಷದ ಹಿಂದೆ ಅಬಕಾರಿ ಕಛೇರಿಯಲ್ಲಿ ಅಧಿಕಾರಿಗಳು ನಿಪಿ-1 ಕ್ಕೆ ನನ್ನ ಸಹಿ ಪಡೆದಿರುತ್ತಾರೆ. ನಿಪಿ-1 ರಲ್ಲಿರುವ ಮಾಹಿತಿಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಮತ್ತು ಯಾವುದೇ ವಸ್ತುಗಳನ್ನು ಜಪ್ತುಪಡಿಸಿಕೊಂಡಿರುವುದಿಲ್ಲ.

***(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ ಸ ಅ ಅವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)***

**ಪಾಟೀ ಸವಾಲುಃ ಮಾನ್ಯ ಎ ಪಿ ಪಿ ಯವರಿಂದ.**

ದಿಃ 04-11-2023 ರಂದು ಸಂಜೆ 4 ರ ಸಮಯದಲ್ಲಿ ಚಾಸಾ-6 ರವರಿಗೆ ಆರೋಪಿಯು ಕಳ್ಳಭಟ್ಟಿ ಸಾರಾಯಿಯನ್ನು ಅಕ್ರಮವಾಗಿ ಹೊಂದಿರುವ ಬಗ್ಗೆ ಮಾಹಿತಿ ಬಂದಿದ್ದು ಸದರಿ ವಿಚಾರವನ್ನು ನನಗೆ ತಿಳಿಸಿ ಪಂಚನಾಮೆಗೆ ಬರುವಂತೆ ಸಹಕರಿಸುವಂತೆ ಕೇಳಿದಾಗ ನಾನು

ಒಪ್ಪಿರುತ್ತೇನೆ ಎಂದರೆ ಸರಿಯಲ್ಲ. ಆ ನಂತರ ಆರೋಪಿಗೆ ಸೇರಿದ ದನದ ಕೊಟ್ಟಿಗೆಯನ್ನು ಪರಿಶೀಲಿಸಿದಾಗ ಪಶ್ಚಿಮ ದಿಕ್ಕಿನಲ್ಲಿ ಒಂದು ಸ್ಟೀಲ್ ಕ್ಯಾರಿಯರ್, ಒಂದು ಕಂದು ಬಣ್ಣದ ಪ್ಲಾಸ್ಟಿಕ್ ಕೊಡ, ಒಂದು ಬಿಳಿ ಮತ್ತು ನೀಲಿ ಮಿಶ್ರಿತ ಬಕೆಟ್ ಹಾಗೂ ಅಲ್ಯೂಮಿನಿಯಂ ಕಡುಬಿನ ಪಾತ್ರೆ ಕಂಡುಬಂದಿರುತ್ತದೆ ಎಂದರೆ ಸರಿಯಲ್ಲ. ಅವುಗಳನ್ನು ಪರಿಶೀಲಿಸಿದಾಗ 03 ಲೀ ಸಾಮರ್ಥ್ಯದ ಸ್ಟೀಲ್ ಕ್ಯಾರಿಯರ್ ನಲ್ಲಿ ಗಾಟು ವಾಸನೆಯಿಂದ ಕೂಡಿದ 02 ಲೀ ಭಟ್ಟಿ ಸಾರಾಯಿ, 20 ಲೀ ಸಾಮರ್ಥ್ಯದ ಕಂದು ಬಣ್ಣದ ಪ್ಲಾಸ್ಟಿಕ್ ಕೊಡದಲ್ಲಿ ಮತ್ತು ಪ್ಲಾಸ್ಟಿಕ್ ಬಕೆಟ್ ನಲ್ಲಿ 10 ಲೀ ನಂತೆ ಒಟ್ಟು 30 ಲೀ ಬೆಲ್ಲದಕೊಳೆ ಇರುವುದು ಕಂಡುಬಂತು ಎಂದರೆ ಸರಿಯಲ್ಲ. ದೊರೆತ ಮುದ್ದೆಮಾಲಿನಿಂದ ರಾಸಾಯನಿಕ ಪರೀಕ್ಷೆಗಾಗಿ ಸ್ಟೀಲ್ ಕ್ಯಾರಿಯರ್ ನಿಂದ 500 ಮಿ ಲಿ ಯ ಕಳ್ಳಭಟ್ಟಿ ಸಾರಾಯಿ, ತಲಾ 500 ಮಿಲಿಯಷ್ಟು ಬೆಲ್ಲದ ಕೊಳೆಯನ್ನು ಪ್ಲಾಸ್ಟಿಕ್ ಕೊಡದಿಂದ ಮತ್ತು ಬಕೆಟ್ ನಿಂದ ಮಾದರಿಗಾಗಿ ತೆಗೆದು ಬಿಳಿ ಬಟ್ಟೆಯಿಂದ ಕಟ್ಟಿ ದಾರದಿಂದ ಸುತ್ತಿ ಇಲಾಖಾ ಸೀಲ್ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಸ್ಥಳದಲ್ಲಿ ಉಳಿದ ಸ್ವತ್ತುಗಳನ್ನು ಮತ್ತು ಆರೋಪಿಯನ್ನು ವಶಕ್ಕೆ ಪಡೆದುಕೊಂಡು ಸಂಜೆ 4.00 ರಿಂದ 5.00 ರ ತನಕ ನಿ.ಪಿ. 1 ರಂತೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಈಗ ನನಗೆ ಓದಿ ಹೇಳಿದಂತೆ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಹೇಳಿಕೆಯನ್ನು ಅಲ್ಲಗಳೆದಿದ್ದರಿಂದ ಹೇಳಿಕೆಯನ್ನು ನಿ.ಪಿ. 3 ಎಂದು ಗುರುತಿಸಲಾಯಿತು. ನಿ.ಪಿ. 1 ಮತ್ತು 3 ಕ್ಕೆ ನಾನು ಓದಿ ನೋಡಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ**

**ಮರು ವಿಚಾರಣೆಃ ಇಲ್ಲ**

ಉಕ್ತ ಲೇಖನದಂತೆ ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ ಹೆ ಕೇ ಸ ಇ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ ಸಕಲೇಶಪುರ**